All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

12.11.2025 6.40 P.M.
***************

ಮುಖ್ಯಾಂಶಗಳು

- ಗ್ರಾಮ ಪಂಚಾಯಿತಿ ಮೀಸಲಾತಿಯನ್ನು ಜನವರಿ ೧೬ರೊಳಗೆ ಅಂತಿಮಗೊಳಿಸುವಂತೆ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ
- ರಾಜ್ಯದಲ್ಲಿ ಬಂಡವಾಳ ಹೂಡಿಕೆ ಕುರಿತಂತೆ ಸಿಂಗಾಪುರ ವಾಣಿಜ್ಯ ಸಚಿವರ ನಿಯೋಗ ರಾಜ್ಯ ಸರ್ಕಾರದ ಜೊತೆ ಮಾತುಕತೆ
- ಸಮಾಜದಲ್ಲಿ ಸಮಾನತೆ ಇದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ
- ರಾಜ್ಯದ ಎಲ್ಲಾ ಗ್ರಾಮಪಂಚಾಯತಿಗಳಲ್ಲಿ ೧೦ ವಾರಗಳ ಕಾಲ ಮಕ್ಕಳ ಸ್ನೇಹಿ ಗ್ರಾಮ ಪಂಚಾಯಿತಿ ಅಭಿಯಾನ
- ದೆಹಲಿ ಕಾರು ಸ್ಫೋಟ ಪ್ರಕರಣ ; ಮುಖ್ಯಮಂತ್ರಿ ನೀಡಿದ ಹೇಳಿಕೆ ಹಿಂಪಡೆಯುವಂತೆ ಬಿ.ವೈ. ವಿಜಯೇಂದ್ರ ಆಗ್ರಹ

***************

ಗ್ರಾಮ ಪಂಚಾಯಿತಿ ಮೀಸಲಾತಿ ಕುರಿತಂತೆ ಸರ್ಕಾರಕ್ಕೆ ಉಚ್ಚನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ

ಜನವರಿ ೧೬ರೊಳಗೆ ಅವಧಿ ಮುಗಿಯಲಿರುವ ೫ ಸಾವಿರದ ೯೫೦ ಗ್ರಾಮ ಪಂಚಾಯಿತಿಗಳ ಮೀಸಲಾತಿಯನ್ನು ಅಂತಿಮಗೊಳಿಸುವಂತೆ ನಿರ್ದೇಶನ ನೀಡಿದೆ.

ರಾಜ್ಯ ಚುನಾವಣಾ ಆಯೋಗದ ಅರ್ಜಿಯನ್ನು ಪರಿಶೀಲನೆ ನಡೆಸುವ ವೇಳೆ ಮುಖ್ಯ ನ್ಯಾಯಮೂರ್ತಿ ವಿಭು ಭಕ್ರು, ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ನೇತೃತ್ವದ ವಿಭಾಗೀಯ ಪೀಠ ನೋಟಿಸ್ ಜಾರಿ ಮಾಡಿದೆ.

ರಾಜ್ಯ ಸರ್ಕಾರವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಎರಡು ವಾರಗಳಲ್ಲಿ ಆಕ್ಷೇಪಣೆ ಸಲ್ಲಿಸುವಂತೆ ನ್ಯಾಯಾಲಯ ಸೂಚಿಸಿದೆ.

***************

ಸಿಂಗಾಪುರ ವಿದೇಶಾಂಗ, ವಾಣಿಜ್ಯ ಮತ್ತು ಕೈಗಾರಿಕೆ ಸಚಿವೆ ಗಾನ್ ಶಿಯೋ ಹುಯಂಗ್ ನೇತೃತ್ವದ ನಿಯೋಗವು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿತು.

ಈ ವೇಳೆ ಬಂಡವಾಳ ಹೂಡಿಕೆ ಮತ್ತು ಸಹಭಾಗಿತ್ವ ಕುರಿತಂತೆ ಚರ್ಚೆ ನಡೆಸಲಾಗಿದೆ. ಬಳಿಕ ಮಾತನಾಡಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಭಾರತದಲ್ಲಿ ಅತ್ಯಧಿಕ ವಿದೇಶಿ ನೇರ ಹೂಡಿಕೆ ಮಾಡುತ್ತಿರುವ ಸಿಂಗಾಪುರ ಜೊತೆ ಕೈಗಾರಿಕಾ ಮತ್ತು ವಾಣಿಜ್ಯ ಸಹಭಾಗಿತ್ವ ಬೆಳೆಸಿಕೊಳ್ಳಲು ರಾಜ್ಯದ ಪಾಲಿಗೆ ಒಳ್ಳೆಯ ಅವಕಾಶವಿದೆ ಎಂದು ತಿಳಿಸಿದ್ದಾರೆ.

ಸಿಂಗಾಪುರ ಮತ್ತು ಬೆಂಗಳೂರು ವಿಶ್ವದರ್ಜೆಯ ನಗರಗಳಾಗಿದ್ದು, ಪರಸ್ಪರ ಸಹಭಾಗಿತ್ವದ ಸಮನ್ವಯಕ್ಕೆ ಒತ್ತು ನೀಡಲಾಗುವುದು ಎಂದು ಹೇಳಿದ್ದಾರೆ. ಭಾರತದಲ್ಲಿ ಸಿಂಗಾಪುರದ ಕಂಪನಿಗಳು ೧೭೪.೮೮ ಬಿಲಿಯನ್ ಡಾಲರ್ ಹೂಡಿಕೆ ಮಾಡಿವೆ ಎಂದು ತಿಳಿಸಿದ್ದಾರೆ.

ಈ ನಡುವೆ ರಾಜ್ಯದಲ್ಲಿ ಶಿಕ್ಷಣ, ಬಾಹ್ಯಾಕಾಶ, ಜೈವಿಕ ತಂತ್ರಜ್ಞಾನ, ವೈಮಾಂತರಿಕ್ಷ, ರಕ್ಷಣೆ, ಇಂಧನ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಸಂಬಂಧ ಆಸ್ಟ್ರೇಲಿಯಾದ ಕಾನ್ಸುಲ್ ಜನರಲ್ ಹಿಲರಿ ಮೆಕ್-ಗೀಚಿ ಅವರು, ಸಚಿವ ಎಂ.ಬಿ. ಪಾಟೀಲ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

***************

ಮುಖ್ಯಮಂತ್ರಿಯಾಗಿ ಹಿಂದುಳಿದವರು, ಪರಿಶಿಷ್ಟರು, ಅಲ್ಪಸಂಖ್ಯಾತರು ಸೇರಿ ಎಲ್ಲಾ ಶೋಷಿತ ಸಮುದಾಯಗಳ ಏಳಿಗೆಗಾಗಿ ಕಾರ್ಯ ನಿರ್ವಹಿಸಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ.

ಬೆಂಗಳೂರಿನಲ್ಲಿ ಇಂದು ನಡೆದ ಕುರುಬರ ಸಂಘ ಮತ್ತು ವಿದ್ಯಾರ್ಥಿ ನಿಲಯದ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ಇಂದು ಮಹಿಳೆಯರು ಬಸ್‌ನಲ್ಲಿ ಉಚಿತವಾಗಿ ಸಂಚರಿಸುತ್ತಿದ್ದಾರೆ. ಸಮಾಜದಲ್ಲಿ ಸಮಾನತೆ ಇದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಅವರು ಪ್ರತಿಪಾದಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೩೦ ಸೆಕೆಂಡ್‌ಗಳು)

***************

ಇದೇ ೨೪ರಿಂದ ೨೦೨೬ರವರೆಗೆ ೧೦ ವಾರಗಳ ಕಾಲ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ ನಡೆಯಲಿದೆ. ಒಂದು ದಿನ ಮಕ್ಕಳ ವಿಶೇಷ ಗ್ರಾಮ ಸಭೆಯನ್ನು ನಡೆಸಲು ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಮಕ್ಕಳಿಗೆ ಅವಶ್ಯವಾದ ಸುಧಾರಣಾ ಕ್ರಮಗಳನ್ನು ಕೈಗೊಳ್ಳುವುದು ಸರ್ಕಾರದ ಎಲ್ಲಾ ಇಲಾಖೆಗಳು, ಜನಪ್ರತಿನಿಧಿಗಳು ಮತ್ತು ಸಮುದಾಯದ ಜವಾಬ್ದಾರಿಯಾಗಿದೆ. ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಮಕ್ಕಳ ಗ್ರಾಮ ಸಭೆ ನಡೆಸಲು ದಿನಾಂಕವನ್ನು ನಿಗದಿಗೊಳಿಸಲು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಮಕ್ಕಳ ಜನನ ನೋಂದಣಿ ಹಾಗೂ ಜನನ ಪ್ರಮಾಣ ಪತ್ರ ವಿತರಣೆ, ಪೌಷ್ಠಿಕ ಆಹಾರ ಕುರಿತು ಮಾರ್ಗದರ್ಶನ ಹಾಗೂ ಜಾಗೃತಿ, ಮಕ್ಕಳಿಗೆ ಚುಚ್ಚುಮದ್ದು ಕೊಡುವ ಪ್ರಾಮುಖ್ಯತೆ ಬಗ್ಗೆ ಮಕ್ಕಳ ಗ್ರಾಮಸಭೆಯಲ್ಲಿ ಆದ್ಯತೆ ನೀಡಬೇಕು. ಮಾನಸಿಕ ಆರೋಗ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಮಕ್ಕಳ ಹಕ್ಕುಗಳು, ಬಾಲ್ಯ ವಿವಾಹ ನಿಷೇಧ, ಕಿಶೋರಾವಸ್ಥೆಯಲ್ಲಿ ಉದ್ಯೋಗ ನಿಷೇಧದ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ದೆಹಲಿ ಕಾರು ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ ಹೇಳಿಕೆಯನ್ನು ಕೂಡಲೇ ಹಿಂಪಡೆಯಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಒತ್ತಾಯಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಚುನಾವಣೆ ವೇಳೆಯಲ್ಲಿ ಏಕೆ ಸ್ಫೋಟಗಳು ಹೆಚ್ಚು ಎಂಬ ಬಗ್ಗೆ ಕೇಂದ್ರವೇ ಉತ್ತರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದರು.

ಈ ಹೇಳಿಕೆ ರಾಜಕೀಯ ಪ್ರೇರಿತವಾಗಿದೆ ಎಂದು ಅವರು ದೂರಿದ್ದಾರೆ.

***************

ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಹೋರಾಟಗಾರರಾದ ಗಿರೀಶ್ ಮಟ್ಟಣನವರ್, ಮಹೇಶ್ ಶೆಟ್ಟಿ ತಿಮ್ಮರೋಡಿ, ವಿಠಲ್ ಗೌಡ, ಟಿ. ಜಯಂತ್ ವಿರುದ್ಧದ ಎಸ್‌ಐಟಿ ತನಿಖೆಗೆ ಉಚ್ಚ ನ್ಯಾಯಾಲಯ ತಡೆಯಾಜ್ಞೆ ನೀಡಿದೆ.

ತನಿಖೆಯ ಸಮಯದಲ್ಲಿ ಕಿರುಕುಳ ನೀಡದಂತೆ ನ್ಯಾಯಮೂರ್ತಿ ಮೊಹಮ್ಮದ್ ನವಾಜ್ ನೇತೃತ್ವದ ಪೀಠವು ಎಸ್‌ಐಟಿಗೆ ನಿರ್ದೇಶನ ನೀಡಿದೆ.

ತಮ್ಮ ಮೇಲಿನ ಎಫ್‌ಐಆರ್ ಮತ್ತು ತನಿಖೆಯನ್ನು ರದ್ದುಗೊಳಿಸುವಂತೆ ಕೋರಿ ಹೋರಾಟಗಾರರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು.

***************

ತುಂಗಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಬೆಳೆಗೂ ನೀರು ನೀಡಬೇಕೆಂದು ಆಗ್ರಹಿಸಿ ರೈತರು ರೈತ ಸಂಘದ ಅಧ್ಯಕ್ಷ ಮಾಧವ ರೆಡ್ಡಿ ನೇತೃತ್ವದಲ್ಲಿ ಇಂದು ಪಾದಯಾತ್ರೆ ಆರಂಭಿಸಿದ್ದಾರೆ.

ಕರೂರಿನಿಂದ ಆರಂಭಗೊಂಡಿರುವ ಪಾದಯಾತ್ರೆ ಕುರುಗೋಡು, ಎಮ್ಮಿಗನೂರು, ಕಂಪ್ಲಿ, ಕಮಲಾಪುರ ಮೂಲಕ ಸಾಗಿ ಇದೇ ೧೭ಕ್ಕೆ ತುಂಗಭದ್ರಾ ಜಲಾಶಯದ ಎದುರು ಸೇರಲಿದೆ. ನಂತರ ಅನಿರ್ದಿಷ್ಟಾವಧಿ ಧರಣಿ ನಡೆಯಲಿದೆ

ಈಗಿರುವ ಬೆಳೆಗೆ ಡಿಸೆಂಬರ್‌ವರೆಗೆ ಹಾಗೂ ಬಳಿಕ ಎರಡನೇ ಬೆಳೆಗೆ ನೀರು ಒದಗಿಸಬೇಕು. ಜಲಾಶಯದ ಎಲ್ಲ ಗೇಟ್ ಗಳನ್ನು ಮುಂದಿನ ಜೂನ್ ಒಳಗೆ ಅಳವಡಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ತುಂಗಭದ್ರ ಜಲಾಶಯದ ನೀರಾವರಿ ಸಲಹಾ ಸಮಿತಿಯ ಇದೇ ೧೪ರಂದು ಬೆಂಗಳೂರಿನಲ್ಲಿ ನಡೆಯಲಿದೆ.

***************

ರಾಯಚೂರಿನಲ್ಲಿ ನಡೆಯುತ್ತಿರುವ ಯೋನೆಕ್ಸ್ ಸನ್‌ರೈಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ೧೧ ವರ್ಷ ವಯೋಮಾನದ ಪಂದ್ಯದಲ್ಲಿ ಇಂದು ಶ್ರೀಯಾ ಎ ರಾವ್ ಡಬಲ್ಸ್ ಮತ್ತು ಸಿಂಗಲ್ಸ್ ಹಣಾಹಣಿಯಲ್ಲಿ ಜಯಗಳಿಸಿ ಫೈನಲ್ಸ್ ತಲುಪಿದ್ದಾರೆ.

ನಾಳೆ ಅವರು, ಸಿಂಗಲ್ಸ್ ಫೈನಲ್ಸ್ ಪಂದ್ಯದಲ್ಲಿ ಗೌರಿ ಸಂತೋಷ್ ಹಾಗೂ ಡಬಲ್ಸ್‌ನಲ್ಲಿ ನಿಹಾರಿಕಾ ರಾಜ್ ಅವರೊಂದಿಗೆ ರಾಜೇಶ್ ಕುಮಾರ್ ಹಾಗೂ ಋಷಿ ಅವರನ್ನು ಎದುರಿಸಲಿದ್ದಾರೆ.

ಸಿಂಗಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಶ್ರೀಯಾ ರಾವ್ ಅವರು, ಸಮೃದ್ಧಿ ತಾಂಡ್ಲೆ ವಿರುದ್ಧ ೨೧-೧೮, ೨೧-೧೯ ಸೆಟ್‌ಗಳ ಅಂತರದಲ್ಲಿ ಜಯ ಸಾಧಿಸಿದ್ದರೆ, ಡಬಲ್ಸ್‌ನಲ್ಲಿ ನಿಹಾರಿಕಾ ರಾಜ್ ಅವರೊಂದಿಗೆ ೨೧-೧೨, ೨೧-೧೩ ಅಂತರದಲ್ಲಿ ಜೊತ್ಸನಾ-ಪ್ರಿಶಾ ಜೋಡಿಯನ್ನು ಮಣಿಸಿದರು.

***************

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ನಿರ್ದೇಶನಾಲಯದ ಆಶ್ರಯದಲ್ಲಿ ಕಂಠೀರವ ಕ್ರೀಡಾಂಗಣದಲ್ಲಿ ಏರ್ಪಡಿಸಿರುವ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಬಿಸಿಯು ಕುಲಪತಿ ಪ್ರೊ.ರಮೇಶ್.ಬಿ ಚಾಲನೆ ನೀಡಿದರು.

ವಿಶ್ವವಿದ್ಯಾನಿಲಯದ ಧ್ವಜಾರೋಹಣ ನೆರವೇರಿಸಿದ ಬಳಿಕ ಪಥಸಂಚಲನ ವೀಕ್ಷಿಸಿ ತ್ರಿವರ್ಣ ಬಲೂನ್‌ಗಳನ್ನು ಹಾರಿಬಿಡುವ ಮೂಲಕ ಕ್ರೀಡಾಕೂಟಕ್ಕೆ ವಿದ್ಯುಕ್ತ ಚಾಲನೆ ನೀಡಿದರು. ಎರಡು ದಿನಗಳ ಕ್ರೀಡಾಕೂಟದಲ್ಲಿ ೧೩೭ ಕಾಲೇಜುಗಳಿಂದ ೧ ಸಾವಿರದ ೨೦೦ ಕ್ರೀಡಾಪಟುಗಳು ಪಾಲ್ಗೊಂಡಿದ್ದಾರೆ.

ಪಠ್ಯಕ್ರಮ ಅಧ್ಯಯನದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ದೈಹಿಕ ಸದೃಢತೆ ಬೆಳೆಸಿಕೊಳ್ಳುವಂತೆ ಕರೆ ನೀಡಿದ್ದಾರೆ.

*******ಮುಕ್ತಾಯ*******